**ಕರ್ನಾಟಕ ಸರ್ಕಾರ**

ಸಂಖ್ಯೆ:ಪಪೂಶಿಇ/ಶೈ.ಶಾ./MHRD Sch/2016-IV Ren/2020-21

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಕ್ರಾಸ್, ಸಂಪಿಗೆ ರಸ್ತೆ,
ಮಲ್ಲೇಶ್ವರಂ, ಬೆಂಗಳೂರು-12.
ದಿನಾಂಕ: 7-09-2020

**ಪತ್ರಿಕಾ ಪ್ರಕಟಣೆ**

**2016**ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ **"Direct Benefit Transfer (DBT) Programme"** ನ ಅಡಿಯಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ಕಡ್ಡಾಯವಾಗಿ ಅವರ **ನಾಲ್ಕನೇಯ ನವೀಕರಣಕ್ಕೆ "online"** ಮೂಲಕ ಅರ್ಜಿಯನ್ನು ಸಲ್ಲಿಸಬೇಕಾಗಿದೆ. ಈ ಸಂಬಂಧವಾಗಿ ಕೇಂದ್ರ ಸರ್ಕಾರದ ವತಿಯಿಂದ **website:www.scholarships.gov.**ನ **National e-Scholarship Portal**ನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದಕಾರಣ, **2016**ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳು **ನಾಲ್ಕನೇಯ ನವೀಕರಣದ** ನಿಮಿತ್ತ ಈ **portal** ನಲ್ಲಿಯೇ ಅರ್ಜಿಗಳನ್ನು **"online"** ಮೂಲಕ ಸಲ್ಲಿಸಬೇಕಿರುತ್ತದೆ. ವಿದ್ಯಾರ್ಥಿಗಳು ಈ ವೆಬ್‌ಸೈಟನ್ನು ಕೂಡಲೇ ಸಂಪರ್ಕಿಸಿ **"online"** ಮೂಲಕ ದಿನಾಂಕ:**31-10-2020** ರೊಳಗಾಗಿ ಅರ್ಜಿಯನ್ನು ಸಲ್ಲಿಸುವುದು.

ಇಲಾಖಾ ವೆಬ್‌ಸೈಟ್‌ನಲ್ಲಿಯೂ ಕೂಡ **2016**ನೇ ಸಾಲಿನಲ್ಲಿ ಆಯ್ಕೆಗೊಂಡಿರುವ ವಿದ್ಯಾರ್ಥಿಗಳಿಗೆ **"online"** ಮೂಲಕ **ನಾಲ್ಕನೇಯ ನವೀಕರಣಕ್ಕೆ** ಅರ್ಜಿ ಸಲ್ಲಿಸುವ ಕುರಿತು ಸುತ್ತೋಲೆಯನ್ನು ಅಳವಡಿಸಲಾಗಿದೆ. ವೆಬ್‌ಸೈಟ್ ಸಂಖ್ಯೆ:**http://pue.kar.nic.in =>Scholarship=>MHRD Scholarship=> MHRD Scholarship 2016 - IV RENEWAL.** ವಿದ್ಯಾರ್ಥಿಗಳು ಈ ವೆಬ್‌ಸೈಟನ್ನು ಸಂಪರ್ಕಿಸಿ ತಮಗೆ ಸಂಬಂಧಪಟ್ಟ ಮಾಹಿತಿಯನ್ನು ಪಡೆದು ದಿನಾಂಕ: **31-10-2020**ರೊಳಗಾಗಿ **Online** ಮೂಲಕ ಅರ್ಜಿಯನ್ನು ಸಲ್ಲಿಸುವುದು. **ನಾಲ್ಕನೇಯ ನವೀಕರಣ** ಹಾಗೂ ಇನ್ನು ಮುಂದಿನ ನವೀಕರಣಗಳಿಗೆ ಆಧಾರ್ ಸಂಖ್ಯೆಯನ್ನು ಪಡೆದು ಬ್ಯಾಂಕ್ ಖಾತೆಯೊಂದಿಗೆ ಲಿಂಕ್ ಮಾಡಿರುವುದು. ಪ್ರಾಚಾರ್ಯರುಗಳು / ಸಂಸ್ಥೆಯವರು ಅರ್ಹ ವಿದ್ಯಾರ್ಥಿಗಳ ಅರ್ಜಿಗಳನ್ನು ಪರಿಶೀಲಿಸಿ ಅನುಮೋದಿಸುವ / ತಿರಸ್ಕರಿಸುವ ಕಾರ್ಯವನ್ನು ತಮ್ಮ ಹಂತದಲ್ಲಿಯೇ ನಿರ್ವಹಿಸುವುದು.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.